# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ
# ಕೆಂಗೇರಿ ಉಪ ವಿಭಾಗ, ವಾರ್ಡ್ ನಂ.198, ಹೆಮ್ಮಿಗೆಪುರ
# ವಾರ್ಡ್ ಸಮಿತಿ ಸಭೆ ದಿನಾಂಕ: 18/12/2021ರ
# ಸಭಾ ನಡವಳಿ

ಸಕಾಅ/ಕೆಂಉವಿ/ವಾರ್ಡ್ ಕಮಿಟಿ-ಸಭೆ -13/2021-22

ದಿನಾಂಕ: 18.12.2021

ದಿನಾಂಕ: 18.12.2021 ರಂದು ಬೆಳಿಗ್ಗೆ 11.00 ಗಂಟೆಗೆ ವಾರ್ಡ್ ನಂ.198, ಹೆಮ್ಮಿಗೆಪುರ ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಪಟ್ಟಣಗೆರೆ, ಬಿ.ಬಿ.ಎಂ.ಪಿ. ಸಮುದಾಯಭವನ ಕಟ್ಟಡದಲ್ಲಿ ನಡೆದ ವಾರ್ಡ್ ಸಮಿತಿಯ ಸಭೆಯ ನಡವಳಿಗಳು

**ಹಾಜರಿದ್ದವರು:**

| ಕ್ರ ಸಂ | ಸಭೆಗೆ ಹಾಜರಾಗಿರುವ ಅಧಿಕಾರಿಗಳು | ಹುದ್ದೆ |
|---|---|---|
| 1 | ಶ್ರೀ ಶಿವಕುಮಾರ್ | ನೋಡಲ್ ಅಧಿಕಾರಿ, ವಾರ್ಡ್ ನಂ.198(ಹೆಮ್ಮಿಗೆಪುರ) ಹಾಗೂ ಕಾರ್ಯಪಾಲಕ ಅಭಿಯಂತರರು, ಉಪ ನಿರ್ದೇಶಕರ ಕಛೇರಿ ಕಟ್ಟಡ ಪರವಾನಗೆ ಕೋಶ-ಉತ್ತರ |
| 2 | ಶ್ರೀ ದಯಾನಂದ.ಎನ್ | ಸಹಾಯಕ ಅಭಿಯಂತರರು, ವಾರ್ಡ್-198, ಹೆಮ್ಮಿಗೆಪುರ |
| 3 | ಶ್ರೀ ರವಿಚಂದ್ರಚಾರಿ | ಹಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.198, ಹೆಮ್ಮಿಗೆಪುರ |
| 4 | ಶ್ರೀಮತಿ ಮೋನಿಕ | ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ನಂ.198, ಹೆಮ್ಮಿಗೆಪುರ |
| 5 | ಶ್ರೀ ರಮೇಶ್ | ವೆಟರ್ನರಿ ಇನ್ಸ್‌ಪೆಕ್ಟರ್ ರಾಜರಾಜೇಶ್ವರಿನಗರ ವಲಯ |
| 6 | ಶ್ರೀ ಸಿ.ವಿ. ಸೂರ್ಯನಾರಾಯಣ | ಜಲ ಪರಿವೀಕ್ಷಕರು ಬೆಂಗಳೂರು ಜಲ ಮಂಡಳಿ |
| 7 | ಶ್ರೀ ಕೃಷ್ಣನಾಯಕ್ | ಕೆಲಸಪರಿವೀಕ್ಷಕರು ವಾರ್ಡ್ ನಂ.198, ಬಿಬಿಎಂಪಿ |

ಶ್ರೀ ದಯಾನಂದ.ಎನ್, ಸಹಾಯಕ ಅಭಿಯಂತರರು ಹಾಗೂ ವಾರ್ಡ್ ಕಮಿಟಿ ಕಾರ್ಯದರ್ಶಿ ರವರು ಸಭೆಯನ್ನು ಉದ್ದೇಶಿಸಿ ಮಾತನಾಡುತ್ತಾ, ಭಾಗವಹಿಸಿದ್ದ ಎಲ್ಲರನ್ನೂ ಸ್ವಾಗತಿಸುವ ಮೂಲಕ ಸಭೆಯನ್ನು



Scanned with CamScanner

ಪ್ರಾರಂಭಿಸುತ್ತಾ ಹಿಂದಿನ ಸಭಾ ನಡವಳಿಯನ್ನು ಓದಿ ರೆಕಾರ್ಡ್ ಮಾಡಲಾಯಿತು ಮತ್ತು ತೆಗೆದುಕೊಂಡ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

❖ **<u>ಕೋವಿಡ್-19 ಸಾಂಕ್ರಾಮಿಕ ರೋಗದ ಬಗ್ಗೆ:</u>**- ಅಧ್ಯಕ್ಷರು, ಕೋವಿಡ್-19ರ ಸಾಂಕ್ರಾಮಿಕ ರೋಗದ ಬಗ್ಗೆ ಹಾಗೂ ಸರ್ಕಾರ ಮತ್ತು ಬಿ.ಬಿ.ಎಂ.ಪಿ. ವತಿಯಿಂದ ನೀಡುತ್ತಿರುವ ಸೌಲಭ್ಯ/ಸೌವಲತ್ತುಗಳು ಹಾಗೂ ಕೋವಿಡ್ ಪರಿವೀಕ್ಷಣೆಯಿಂದ ಮೊದಲುಗೊಂಡು ಆಸ್ಪತ್ರೆಗೆ ದಾಖಲಾಗುವವರೆಗೆ ಮತ್ತು ಕೋವಿಡ್-19 ಪರೀಕ್ಷೆಯ ಬಗ್ಗೆ ಸವಿಸ್ತಾರವಾಗಿ ಸಭೆಗೆ ವಿವರಿಸಿದರು. ಕೋವಿಡ್-19ರ ಪರೀಕ್ಷೆಯನ್ನು ಹೆಚ್ಚು ಮಾಡುವ ಬಗ್ಗೆ ಸಹಕರಿಸುವಂತೆ ಸಭೆಯಲ್ಲಿದ್ದ ವೆಲ್‌ಫೇರ್ ಅಸೋಸಿಯೇಷನ್ ಅಧ್ಯಕ್ಷರುಗಳು ಮತ್ತು ಅಧಿಕಾರಿ ವರ್ಗದವರಿಗೆ ವಿನಂತಿಸಿ, ಆರೋಗ್ಯ ಪರಿವೀಕ್ಷಕರು ಮತ್ತು ಆರೋಗ್ಯಾಧಿಕಾರಿಗಳು ಸದರಿಯವರನ್ನು ಸಂಪರ್ಕಿಸಿ ಸಹಕಾರ ಪಡೆದುಕೊಳ್ಳಲು ಸೂಚಿಸಿದರು ಮತ್ತು ಮಾಷಲ್‌ಗಳನ್ನು ನಿಯೋಜಿಸಿ ಮಾಸ್ಕ್ ಧರಿಸದೇ ಇರುವವರಿಗೆ ದಂಡವನ್ನು ವಿಧಿಸಲು ಸೂಚಿಸಲಾಯಿತು ಹಾಗೂ ಕೋವಿಡ್-19 ವ್ಯಾಕ್ಸಿನ್ ಲಸಿಕೆಗಳನ್ನು ನೀಡುತ್ತಿರುವ ಸ್ಥಳ ವಿವರಗಳನ್ನು ಸಭೆಗೆ ತಿಳಿಸಲಾಯಿತು ಹಾಗೂ ಇತ್ತಿಗೆ ಕೋವಿಡ್‌ನ ರೂಪಾಂತರಿಯಾದ "ಓಮೈಕ್ರಾನ್" ವೈರಾಣು ಬೆಂಗಳೂರಿನಲ್ಲಿ ಪತ್ತೆಯಾಗಿದ್ದು, ಕೋವಿಡ್ ಸುರಕ್ಷತಾ ನಿಯಮಾವಳಿಯನ್ನು ತಪ್ಪದೇ ಪಾಲಿಸಲು ಸಭೆಯಲ್ಲಿ ಹಾಜರಿದ್ದ ಎಲ್ಲಾ ನಿವಾಸಿಗಳಿಗೆ ಹಾಗೂ ಬಡಾವಣೆಯ ಪ್ರತಿನಿಧಿಗಳಿಗೆ ತಿಳಿಸಲಾಯಿತು ಮತ್ತು ಕೋವಿಡ್ ಲಸಿಗಳ ಇದರ ಸದುಪಯೋಗ ಪಡೆಯಲು ಭಾಗವಹಿಸಿದ್ದ ಎಲ್ಲರಿಗೂ ಕೋರಲಾಯಿತು.

❖ **<u>ಘನತ್ಯಾಜ್ಯ ನಿರ್ವಹಣೆ ಬಗ್ಗೆ:</u>**- ವಾರ್ಡ್ ನಂ.198ರಲ್ಲಿ ಈ ಹಿಂದೆ ಘನತ್ಯಾಜ್ಯ ವಿಲೇವಾರಿ ಕಾರ್ಯ ನಿರ್ವಹಿಸುತ್ತಿರುವ ಸರಬರಾಜುದಾರರಾದ ಮೆ|| ಕ್ಲೀನ್‌ಟೆಕ್ ಹಾಗೂ ಶ್ರೀ ಸಿದ್ದಿ ವಿನಾಯಕ ಪ್ರಸನ್ನ ರವರುಗಳು ಸಮರ್ಪಕವಾಗಿ ಕಾರ್ಯನಿರ್ವಹಿಸುತ್ತಿಲ್ಲದ ಕಾರಣ ಈ ಹಿಂದಿನ ಸಭೆಯ ನಿರ್ಣಯದಂತೆ ಸದರಿಯವರುಗಳ ಕಾರ್ಯಾದೇಶವನ್ನು ರದ್ದುಗೊಳಿಸಿ ಹೊಸದಾಗಿ ಕೊಟೇಷನ್ ಆಹ್ವಾನಿಸಿ ಮೇ|| ಎಸ್.ಎಲ್.ಎನ್. ಚೈತನ್ಯ ಎಂಟರ್‌ಪ್ರೈಸಸ್, ಬೆಂಗಳೂರು ರವರಿಗೆ ಘನತ್ಯಾಜ್ಯ ಸರಬರಾಜು ನಿರ್ವಹಣೆಗೆ ಕಾರ್ಯಾದೇಶವನ್ನು ನೀಡಲಾಗಿರುವ ಅಂಶವನ್ನು ಸಭೆಯಗಮನಕ್ಕೆ ತರಲಾಯಿತು.

❖ **<u>ವಿದ್ಯುತ್ ಬೀದಿ ದೀಪಗಳ ನಿರ್ವಹಣೆ:</u>**- ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ಬಾಲಾಜಿ ಬಡಾವಣೆಯಲ್ಲಿ ಇರುವ ಉದ್ಯಾನವನದಲ್ಲಿ ವಿದ್ಯುತ್ ದೀಪಗಳನ್ನು ಅಳವಡಿಸಲಾಗಿರುತ್ತದೆ. ಆದರೆ ಯಾವ ವಿದ್ಯುತ್ ದೀಪಗಳು ಕಾರ್ಯನಿರ್ವಹಿಸುತ್ತಿಲ್ಲದಿರುವ ಬಗ್ಗೆ ಸಭೆಯಲ್ಲಿ ಕೋರಲಾಯಿತು ಮತ್ತು ಪವಮಾನಪುರದಲ್ಲಿ ಹೊಸ ವಿದ್ಯುತ್ ದೀಪಗಳ ಫಿಟ್ಟಿಂಗ್‌ಗಳನ್ನು ಅಳವಡಿಸಲು ಸಭೆಯಲ್ಲಿ ಕೋರಲಾಯಿತು. ಈ ಸಂಬಂಧ ನೋಡಲ್ ಅಧಿಕಾರಿಯವರು ಮಾತನಾಡಿ ಸೂಕ್ತ ಕ್ರಮ ಕೈಗೊಳ್ಳುವ ಬಗ್ಗೆ ಸಂಬಂಧಿಸಿದ ವಿದ್ಯುತ್ ಅಧಿಕಾರಿಗಳೊಂದಿಗೆ ಚರ್ಚಿಸಿ ಸೂಕ್ತ ಕ್ರಮ ಕೈಗೊಳ್ಳಲಾಗುವುದೆಂದು ಸಭೆಗೆ ತಿಳಿಸಿದರು



Scanned with CamScanner

❖ **ತೋಟಗಾರಿಕಾ ಇಲಾಖೆ** :– ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ಬಾಲಾಜಿ ಬಡಾವಣೆಯಲ್ಲಿ ಬರುವ ಉದ್ಯಾನವನವನ್ನು ಸಮರ್ಪಕವಾಗಿ ನಿರ್ವಹಣೆ ಮಾಡದಿರುವ ಬಗ್ಗೆ ಸಭೆಯ ಗಮನಕ್ಕೆ ತರಲಾಯಿತು. ಈ ಸಂಬಂಧ ನೋಡಲ್ ಅಧಿಕಾರಿಯವರು ಮಾತನಾಡಿ ಸೂಕ್ತ ಕ್ರಮ ಕೈಗೊಳ್ಳುವ ಬಗ್ಗೆ ಸಂಬಂಧಿಸಿದ ತೋಟಗಾರಿಕೆ ಇಲಾಖೆ ಅಧಿಕಾರಿಗಳಿಗೆ ಸೂಕ್ತ ಕ್ರಮ ಕೈಗೊಳ್ಳಲು ಕೋರಲಾಗುವುದೆಂದು ಸಭೆಗೆ ತಿಳಿಸಿದರು.

❖ **ಪಶುಸಂಗೋಪನೆ ಇಲಾಖೆ**:– ವಾರ್ಡ್ ನಂ.198ರ ವ್ಯಾಪ್ತಿಯಲ್ಲಿ ಬರುವ ಪವಮಾನಪುರ ಮತ್ತು ವಾಜರಹಳ್ಳಿ ಬಾಲಾಜಿ ಬಡಾವಣೆಯಲ್ಲಿ ಬೀದಿ ನಾಯಿಗಳಿಂದ ತುಂಬಾ ತೊಂದರೆಯಾಗುತ್ತಿದ್ದು, ಮತ್ತು ಸಂತಾನೋತ್ಪತ್ತಿ ಹೆಚ್ಚಾಗಿ ಆಗುತ್ತಿದ್ದು, ಸೂಕ್ತ ಕ್ರಮ ಕೈಗೊಳ್ಳಲು ಸಭೆಗೆ ಕೋರಿದರು. ಈ ಸಂಬಂಧ ಸಭೆಯಲ್ಲಿ ಹಾಜರಿದ್ದ ಪಶುಸಂಗೋಪನಾ ಅಧಿಕಾರಿಗಳು ಮಾತನಾಡಿ ಬೀದಿ ನಾಯಿಗಳ ನಿಯಂತ್ರಣಕ್ಕೆ ಸಂಬಂಧಿಸಿದ ತಂಡವನ್ನು ಕಳುಹಿಸಿ ಅಗತ್ಯ ಕ್ರಮ ಕೈಗೊಳ್ಳಲಾಗುವುದೆಂದು ಸಭೆಗೆ ತಿಳಿಸಿದರು

❖ **ವಾರ್ಡ್‌ನ ವಿವಿಧ ಕಾಮಗಾರಿಗಳ ಅಭಿವೃದ್ಧಿ ಕಾರ್ಯಗಳ ಬಗ್ಗೆ** :– 1) ವಾರ್ಡ್ ನಂ.198ರಲ್ಲಿ ಬರುವ ಬಾಲಾಜಿ ಬಡಾವಣೆಯಲ್ಲಿ ಪಾಲಿಕೆ ವತಿಯಿಂದ 110 ಹಳ್ಳಿಗಳ ರಸ್ತೆಗಳನ್ನು ಅಭಿವೃದ್ಧಿ ಪಡಿಸುತ್ತಿರುವ ಬಗ್ಗೆ ಬಡಾವಣೆಯ ಸದಸ್ಯರು ಸಭೆಯಲ್ಲಿ ಅಭಿನಂದನೆಗಳನ್ನು ಸಲ್ಲಿಸಿದರು ಹಾಗೂ ಉಳಿದ ಕೆಲವು ರಸ್ತೆಗಳನ್ನು ಮುಂದಿನ ದಿನಗಳಲ್ಲಿ ಲಭ್ಯವಾಗುವ ಅನುದಾನದಲ್ಲಿ ಅಭಿವೃದ್ಧಿಪಡಿಸಿಕೊಡಬೇಕಾಗಿ ಸಭೆಗೆ ಕೋರಿದರು.

2) ವಾರ್ಡ್ ನಂ.198ರಲ್ಲಿ ಬರುವ ವಿಜಯಶ್ರೀ ಬಡಾವಣೆಯಲ್ಲಿ ರಸ್ತೆ ಗುಂಡಿಗಳನ್ನು ಮುಚ್ಚಲು ಸಭೆಗೆ ಕೋರಲಾಯಿತು. ಈ ಸಂಬಂಧ ವಾರ್ಡ್‌ನ ಸಹಾಯಕ ಅಭಿಯಂತರರು ಮಾತನಾಡಿ ವಾರ್ಡ್ ವ್ಯಾಪ್ತಿಯಲ್ಲಿ ಇರುವ ರಸ್ತೆಗುಂಡಿಗಳನ್ನು ಮುಚ್ಚಲು ಕೆಲಸ ಪ್ರಾರಂಭವಾಗಿದ್ದು, ಗುಂಡಿಗಳಿಗೆ ಈಗಾಗಲೇ ವೆಟ್‌ಮಿಕ್ಸ್ ಮಿಶ್ರಣವನ್ನು ಹಾಕಲಾಗಿದ್ದು, ಅದಕ್ಕೆ ಮುಂದುವರೆದಂತೆ ಡಾಂಬರಿನಿಂದ ರಸ್ತೆಗುಂಡಿಗಳನ್ನು ಮುಚ್ಚಲಾಗುವುದೆಂದು ಸಭೆಗೆ ತಿಳಿಸಿದರು.

3) ವಾರ್ಡ್ ನಂ.198ರಲ್ಲಿ ಬರುವ ಪವಮಾನಪುರದಲ್ಲಿ ರಸ್ತೆ ಅಭಿವೃದ್ಧಿಪಡಿಸಿಕೊಡಬೇಕೆಂದು ಸಭೆಗೆ ಕೋರಲಾಯಿತು. ಈ ಸಂಬಂಧ ನೋಡಲ್ ಅಧಿಕಾರಿಗಳು ಮಾತನಾಡಿ ಅನುದಾನ ಲಭ್ಯತೆಯ ಅನುಗುಣವಾಗಿ ಅಭಿವೃದ್ಧಿ ಕಾರ್ಯವನ್ನು ಕೈಗೊಳ್ಳಲಾಗುವುದೆಂದು ಸಭೆಗೆ ತಿಳಿಸಿದರು.

Dayadan

(ದಯಾನಂದ.ಎನ್)
ಕಾರ್ಯದರ್ಶಿ
ಹಾಗೂ ಸಹಾಯಕ ಅಭಿಯಂತರರು
ವಾರ್ಡ್–198, ಹೆಮ್ಮಿಗೆಪುರ

(ಶಿವಕುಮಾರ್)
ನೋಡಲ್ ಅಧಿಕಾರಿ
ವಾರ್ಡ್ ಸಮಿತಿ
ವಾರ್ಡ್–198, ಹೆಮ್ಮಿಗೆಪುರ



Scanned with CamScanner

<u>ಪ್ರತಿಯನ್ನು:-</u>

1) ಮಾನ್ಯ ಸಹಕಾರ ಸಚಿವರು, ಕರ್ನಾಟಕ ಸರ್ಕಾರ ರವರ ಕಛೇರಿಗೆ ಸಲ್ಲಿಸಿದೆ.
2) ಕೌನ್ಸಿಲ್ ಕಾರ್ಯದರ್ಶಿ, ಬಿ.ಬಿ.ಎಂ.ಪಿ. ಕೇಂದ್ರ ಕಛೇರಿ ರವರ ಅವಗಾಹನೆಗೆ ಸಲ್ಲಿಸಿದೆ.
3) ಜಂಟಿ ಆಯುಕ್ತರು, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
4) ಮುಖ್ಯ ಅಭಿಯಂತರರು, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
5) ಅಧೀಕ್ಷಕ ಅಭಿಯಂತರರು, ಘನತ್ಯಾಜ್ಯ ನಿರ್ವಹಣೆ, ರಾಜರಾಜೇಶ್ವರಿನಗರ ವಲಯರವರ ಅವಗಾಹನೆಗೆ ಸಲ್ಲಿಸಿದೆ.
6) ಕಾರ್ಯಪಾಲಕ ಅಭಿಯಂತರರು (ಕೆಂಗೇರಿ ವಿಭಾಗ) ರವರ ಅವಗಾಹನೆಗೆ ಸಲ್ಲಿಸಿದೆ.
7) ಕಂದಾಯ ಅಧಿಕಾರಿಗಳು (ಕೆಂಗೇರಿ ವಲಯ) ರವರ ಮಾಹಿತಿಗಾಗಿ ಕಳುಹಿಸಿದೆ.
8) ಕಾರ್ಯಪಾಲಕ ಅಭಿಯಂತರರು (ರಸ್ತೆ ಮೂಲಭೂತ ಸೌಕರ್ಯ, ರಾಜರಾಜೇಶ್ವರಿನಗರ ವಿಭಾಗ) ರವರ ಅವಗಾಹನೆಗೆ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
9) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲ ಮಂಡಳಿ, ರಾಜರಾಜೇಶ್ವರಿನಗರ ಉಪವಿಭಾಗ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
10) ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗ, ರಾಜರಾಜೇಶ್ವರಿನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
11) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ, ಕೆಂಗೇರಿ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
12) ತೋಟಗಾರಿಕಾ ಅಧೀಕ್ಷಕರು, ರಾಜರಾಜೇಶ್ವರಿನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
13) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲ ಮಂಡಳಿ, ರಾಜರಾಜೇಶ್ವರಿನಗರ ಯೋಜನಾ (110 ಹಳ್ಳಿಗಳು) ಉಪವಿಭಾಗ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
14) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ, ಕೆಂಗೇರಿ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
15) ತೋಟಗಾರಿಕಾ ಅಧೀಕ್ಷಕರು, ರಾಜರಾಜೇಶ್ವರಿನಗರ ವಲಯ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.
16) ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲ ಮಂಡಳಿ, ರಾಜರಾಜೇಶ್ವರಿನಗರ ಯೋಜನಾ (110 ಹಳ್ಳಿಗಳು) ಉಪವಿಭಾಗ ರವರ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ ಸಲ್ಲಿಸಿದೆ.

Scanned with CamScanner